# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 204(278)

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ. ಸುನೀಲ್ ಗೌಡ ಬಸವನಗೌಡ ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 16-07-2019

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ನೇರವಾಗಿ ಅವರ ಖಾತೆಗೆ online ಮುಖಾಂತರ ಜಮಾ ಮಾಡುವ ವ್ಯವಸ್ಥೆ ಏನಾದರೂ ಇದೆಯೇ; ಇಲ್ಲದಿದ್ದಲ್ಲಿ, ಅಂತಹ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ನೇರವಾಗಿ ಅವರ ಖಾತೆಗೆ online ಮುಖಾಂತರ ಜಮಾ ಮಾಡುವ ವ್ಯವಸ್ಥೆ ಸದ್ಯಕ್ಕೆ ಚಾಲ್ತಿಯಲ್ಲಿರುವುದಿಲ್ಲ ಹಾಗೂ ಸರ್ಕಾರದ ಮುಂದೆ ಅಂತಹ ಪ್ರಸ್ತಾವನೆಯು ಇರುವುದಿಲ್ಲ. |
| (ಆ) | ವಿಜಯಪುರ ಜಿಲ್ಲೆಯಲ್ಲಿ ಸ್ಥಾಪನೆ ಮಾಡಿರುವ ಒಟ್ಟು ಶುದ್ಧ ಕುಡಿಯುವ ನೀರಿನ ಘಟಕಗಳ ಎಷ್ಟು; ಅವುಗಳಲ್ಲಿ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲ; | ವಿಜಯಪುರ ಜಿಲ್ಲೆಯಲ್ಲಿ ಸ್ಥಾಪನೆ ಮಾಡಿರುವ ಒಟ್ಟು ಘಟಕಗಳ ಸಂಖ್ಯೆ: 819, ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ : 707, ಕಾರ್ಯನಿರ್ವಹಿಸದೇ ಇರುವ ಘಟಕಗಳ ಸಂಖ್ಯೆ : 112. |
| (ಇ) | ಕಾರ್ಯನಿರ್ವಹಿಸದೆ ಇರುವಂತಹ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ; ಸದರಿ ಘಟಕಗಳ ದುರಸ್ಥಿ ಮಾಡುವ ಕೆಲಸವನ್ನು ಯಾವ ಸಂಸ್ಥೆಗೆ ನೀಡಲಾಗಿದೆ? | ಏಜೆನ್ಸಿಯವರ ಕಾರ್ಯಾಚರಣೆ ನಿರ್ವಹಣೆಯಲ್ಲಿರುವ ಘಟಕಗಳನ್ನು ಏಜೆನ್ಸಿಯವರಿಂದ ದುರಸ್ತಿಗೊಳಿಸಲಾಗುತ್ತಿದೆ. ಮತ್ತು ಇನ್ನುಳಿದ ಘಟಕಗಳನ್ನು ಇಲಾಖೆ ವತಿಯಿಂದ ದುರಸ್ತಿಗೊಳಿಸಲಾಗುತ್ತಿರುತ್ತದೆ. ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ ಜಿಲ್ಲೆಯ 5 ತಾಲೂಕುಗಳಲ್ಲಿ ನಿರ್ವಹಣೆಯಲ್ಲಿರದ ಘಟಕಗಳಿಗೆ O & M ಟೆಂಡರ್ ಕರೆಯಲಾಗಿದ್ದು, ಟೆಂಡರ್ ಅಂತಿಮಗೊಳಿಸಿದ ನಂತರ ಏಜೆನ್ಸಿಗಳಿಗೆ/ಸಂಸ್ಥೆಗಳಿಗೆ ವಹಿಸಿಕೊಡಲಾಗುವುದು. |

ಸಂಖ್ಯೆ:ಗ್ರಾಅಪ 19 ಜಿಪಸ 2019

(ಕೃಷ್ಣಭೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು